3) ಬಿಡದಿ ಹೋಬಳಿ, ರಾಮನಗರ ತಾಲ್ಲೂಕು

4) ಸೋಲೂರು ಹೋಬಳಿ, ಮಾಗಡಿ ತಾಲ್ಲೂಕು

5) ಸಾತನೂರು ಹೋಬಳಿ, ಕನಕಪುರ ತಾಲ್ಲೂಕು

ಈ ಐದು ಉಪನಗರಗಳ ಪೈಕಿ ಪ್ರಾರಂಭಿಕವಾಗಿ ಬಿಡದಿ ಉಪನಗರವನ್ನು ಅಭಿವೃದ್ಧಿಪಡಿಸಲು ಆದೇಶಿಸಿದೆ

ಆ) ಈ ಉಪನಗರಗಳನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (PPP) ಆಧಾರದ ಮೇಲೆ ಅಭಿವೃದ್ಧಿಪಡಿಸಲಾಗುವುದು ಈ ಉಪನಗರಗಳ ಅಭಿವೃದ್ಧಿಗಾಗಿ ಯಾವುದೇ ಅನುದಾನ ಸರಕಾರದಿಂದ ಒದಗಿಸಿರುವುದಿಲ್ಲ

ಇ) ಈ ಮೇಲ್ಕಂಡ ಐದು ಉಪನಗರಗಳನ್ನು ಹಂತ ಹಂತವಾಗಿ ಅತಿ ಶೀಘ್ರದಲ್ಲಿ ಅಭಿವೃದ್ಧಿಗೊಳಿಸಲು ಸೂಕ್ತ ಕ್ರಮಗಳನ್ನು ವಹಿಸಲಾಗುತ್ತಿದೆ ಈ ಪೈಕಿ ಮೊದಲನೆಯದಾಗಿ ಬಿಡದಿ ಉಪನಗರವನ್ನು ಮುಂದಿನ ಐದು ವರ್ಷಗಳಲ್ಲಿ ಸರ್ವ ರೀತಿಯಲ್ಲಿ ಪೂರ್ಣಗೊಳಿಸಲು ಎಲ್ಲಾ ಕ್ರಮ ಕೈಗೊಳ್ಳಲಾಗುತ್ತಿದೆ ಅದರಂತೆ ಮುಂದಿನ ದಿನಗಳಲ್ಲಿ ಅವಶ್ಯಕತೆಗಳಿಗೆ ತಕ್ಕಂತೆ ಉಳಿದ ಉಪನಗರಗಳ ನಿರ್ಮಾಣವನ್ನು ಸಹ ಆದಷ್ಟು ಬೇಗನೇ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು

1530 (2070) ಶ್ರೀ ಶಿವಶಂಕರ್‌ರೆಡ್ಡಿ ಎನ್ ಹೆಚ್ (ಗೌರಿಬಿದನೂರು) – ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯ ಸದಸ್ಯರ ಅವಧಿಯು ಮುಗಿದು 5–6 ತಿಂಗಳುಗಳು ಕಳೆದಿದ್ದರೂ ಸಹ ಇದುವರೆವಿಗೂ ಇದರ ಚುನಾವಣೆಗಳನ್ನು ನಡೆಸದೇ ಇರಲು ಕಾರಣವೇನು, ಹಾಗೂ ಇರುವ ತೊಡಕುಗಳಾದರೇನು,

ಆ) ಚುನಾವಣೆಗಳು ನಡೆಯದೇ ಪಾಲಿಕೆಗಳಲ್ಲಿ ಕೆಲಸ ಕಾರ್ಯಗಳು ಸಕಾಲದಲ್ಲಿ ಆಗದೇ ಜನತೆಗೆ ತೀವ್ರ ರೀತಿಯ ತೊಂದರೆಯಾಗುತ್ತಿರುವುದು ನಿಜವಲ್ಲವೇ,

ಇ) ಹಾಗಿದ್ದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಸಕಾಲದಲ್ಲಿ ನಡೆಸಿ ಜನತೆಗೆ ಅನುಕೂಲ ಮಾಡಲು ಸರ್ಕಾರವು ಕೈಗೊಳ್ಳುವ ಕ್ರಮವೇನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ 7, ನಗರಸಭೆ, 1 ಪುರಸಭೆ ಹಾಗೂ 110 ನಗರೀಕೃತ ಗ್ರಾಮಗಳನ್ನು ಸೇರಿಸಿ ಸರ್ಕಾರವು ಅಧಿಸೂಚನೆ ಸಂಖ್ಯೆ ನಅಇ 92 ಎಂ ಎನ್‌ವೈ 2006 ದಿನಾಂಕ 16-01-2007 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಿ, ಆದೇಶ ಹೊರಡಿಸಿರುವ ಹಿನ್ನಲೆಯಲ್ಲಿ ಬೆಂಗಳೂರು ಮಹಾನಗರ ಪಾಲಿಕೆಗೆ ನಿಗದಿತ ಅವಧಿಯಲ್ಲಿ ಚುನಾವಣೆಯನ್ನು ನಡೆಸಲು ಸಾಧ್ಯವಾಗಲಿಲ್ಲ

ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಾಗರೀಕರಿಗೆ ಮೂಲಸೌಲಭ್ಯ ಹಾಗೂ ಇತರೆ ಕೆಲಸಗಳಿಗೆ ಯಾವುದೇ ರೀತಿಯಲ್ಲೂ ತೊಂದರೆ ಆಗಬಾರದೆಂದು ಸರ್ಕಾರವು ಕೆಲಸ ಕಾರ್ಯಗಳು ಸಮರ್ಪಕವಾಗಿ ನಿರ್ವಹಿಸಲು ಆಡಳಿತಾಧಿಕಾರಿಯನ್ನು ನೇಮಿಸಿ ಮಧ್ಯಂತರ ವ್ಯವಸ್ಥೆ ಮಾಡಿರುವುದರಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆಯಗಿರುವುದಿಲ್ಲ

ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸಕಾಲದಲ್ಲಿ ಚುನಾವಣೆ ನಡೆಸಲು ಅನುವಾಗುವಂತೆ ಪ್ರಸ್ತುತ ಇರುವ ಗರಿಷ್ಠ 100 ವಾರ್ಡುಗಳ ಮಿತಿಯಷ್ಟು 150 ವಾರ್ಡುಗಳಿಗೆ ಹೆಚ್ಚಿಸುವ ಬಗ್ಗೆ ಕರ್ನಾಟಕ ಮಹಾನಗರ ಪಾಲಿಕೆ ಕಾಯ್ದೆ 1976 ರ ಕಲಂ 7 ಕ್ಕೆ ತಿದ್ದುಪಡಿ ತರಲು ತೀರ್ಮಾನಿಸಿದೆ ಹಾಗೂ 2001 ರ ಜನಗಣತಿ ಅನ್ವಯ ವಾರ್ಡುಗಳ ಕ್ಷೇತ್ರ ಮರು ವಿಂಗಡಣೆ ಕಾರ್ಯವನ್ನು ಸರ್ಕಾರವು ಕೈಗೆತ್ತಿಕೊಂಡಿದ್ದು, ಸದ್ಯದಲ್ಲೆ ಈ ಎಲ್ಲ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಿ ವಾರ್ಡುಗಳಿಗೆ ಮೀಸಲಾತಿಯನ್ನು ನಿಗಧಿಪಡಿಸಿ, ಚುನಾವಣೆ ನಡೆಸಲು ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಆಯುಕ್ತರು, ರಾಜ್ಯ ಚುನಾವಣಾ ಆಯೋಗ ಇವರನ್ನು ಕೋರಲಾಗಿದೆ

1532 (2211) ಶ್ರೀ ಸಿದ್ದು ಸಾವದಿ (ಜಮಖಂಡಿ) – ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?